# ವಿಜಯನಗರ ಹೊಸ ಜಿಲ್ಲೆ: ಬಳ್ಳಾರಿ ಹೋಳು

ಮೊದಲ ಪುಟದಿಂದ

ಅರಣ್ಯ ಸಚಿವ ಆನಂದ್ ಸಿಂಗ್ ಮಾತನಾಡಿ, ಹಿಂದೂ ಸಾಮ್ರಾಜ್ಯದ ರಾಜಧಾನಿಯಾಗಿದ್ದ ಹಂಪಿ ಕ್ಷೇತ್ರವನ್ನು ವಿಜಯನಗರ ಜಿಲ್ಲೆಯಾಗಿ ಘೋಷಿಸಬೇಕು ಎಂದು ಪಶ್ಚಿಮ ಭಾಗದ ತಾಲೂಕುಗಳ ಹೋರಾಟಗಾರರು, ಜನರು ಒತ್ತಾಯ ಮಾಡುತ್ತಿದ್ದರು.

ಇದನ್ನು ಗಂಭೀರವಾಗಿ ಪರಿಗಣಿಸಿದ ಮುಖ್ಯಮಂತ್ರಿ ಯಡಿಯೂರಪ್ಪ ಹಾಗೂ ಸಂಪುಟ ಸದಸ್ಯರು ನಮ್ಮ ಮನವಿಗೆ ಸ್ಪಂದಿಸಿ ತಾತ್ವಿಕ ಒಪ್ಪಿಗೆ ನೀಡಿದ್ದಾರೆ. ಈ ಮೂಲಕ ಇತಿಹಾಸದ ಪುಟಗಳಲ್ಲಿ ದಾಖಲಾಗುವಂತಹ ತೀರ್ಮಾನ ಕೈಗೊಂಡಿದ್ದಾರೆ ಎಂದು ಅಭಿನಂದನೆ ಸಲ್ಲಿಸಿದರು.

ಸಮಾಜ ಕಲ್ಯಾಣ ಇಲಾಖೆ ಸಚಿವ ಬಿ. ಶ್ರೀರಾಮುಲು ಮಾತನಾಡಿ, ಬಳ್ಳಾರಿ ಜಿಲ್ಲೆಯ ಬಗ್ಗೆ ಅನೇಕ ಗೊಂದಲಗಳಿದ್ದವು. ವಿಜಯನಗರ ಜಿಲ್ಲೆ ಮಾಡಬೇಕು ಎಂಬ ಒತ್ತಾಯವಿತ್ತು. ಈ ಬಗ್ಗೆ ಅನೌಪಚಾರಿಕವಾಗಿ ಚರ್ಚಿಸಿ ಅನುಮೋದನೆ ನೀಡಿದ್ದು, ಮುಂದಿನ ದಿನಗಳಲ್ಲಿ ಸರ್ಕಾರ ಅಂತಿಮ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ಹೇಳಿದರು.




ಹೊಸಪೇಟೆಯಲ್ಲಿ ಸಚಿವ ಆನಂದ್‌ಸಿಂಗ್ ಅವರನ್ನು ಅದ್ದೂರಿ ಸ್ವಾಗತದೊಂದಿಗೆ ಬರಮಾಡಿಕೊಳ್ಳಲಾಯಿತು.

ಮೂಲಗಳ ಪ್ರಕಾರ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ವಿಜಯನಗರ ಜಿಲ್ಲೆಯನ್ನು ಅಧಿಕೃತವಾಗಿ ಘೋಷಿಸಲಾಗುತ್ತಿದೆ. ಆಗ ರಾಜ್ಯಕ್ಕೆ 31ನೇ ಜಿಲ್ಲೆಯಾಗಿ ವಿಜಯನಗರ ಸೇರ್ಪಡೆಯಾಗಲಿದೆ. ತನ್ಮೂಲಕ ವಿಜಯನಗರ ಜಿಲ್ಲಾ ಹೋರಾಟ ಸಮಿತಿಯ ಅಡಿಯಲ್ಲಿ 2007ರಲ್ಲಿ ಆರಂಭಗೊಂಡಿದ್ದ ಪ್ರತ್ಯೇಕ ಜಿಲ್ಲೆ ಹೋರಾಟಕ್ಕೆ ಜಯ ಲಭಿಸಿದಂತಾಗುತ್ತದೆ.

## ವಿಜಯನಗರ ಜಿಲ್ಲೆ: ಬಳ್ಳಾರಿಯಲ್ಲಿ ಪ್ರತಿಭಟನೆ, ಹೊಸಪೇಟೇಲಿ ಸಂಭ್ರಮ

ಹರಪನಹಳ್ಳಿ/ಹೊಸಪೇಟೆ/ಬಳ್ಳಾರಿ: ರಾಜ್ಯ ಸರ್ಕಾರದ ಸಚಿವ ಸಂಪುಟ ಸಭೆಯಲ್ಲಿ ವಿಜಯನಗರ ಜಿಲ್ಲೆಯನ್ನು ಹೊಸದಾಗಿ ಅಸ್ತಿತ್ವಕ್ಕೆ ತರಲು ತಾತ್ವಿಕ ಒಪ್ಪಿಗೆ ನೀಡಿರುವುದಕ್ಕೆ ಬಳ್ಳಾರಿ ವ್ಯಾಪ್ತಿಯಲ್ಲಿ ಪರ ವಿರೋಧ ವ್ಯಕ್ತವಾಗಿದೆ. ಆಡಳಿತರೂಢ ಬಿಜೆಪಿಯಲ್ಲಿಯೇ ಬಿರುಕು ಮೂಡಿದೆ.

ಬಿಜೆಪಿ ಶಾಸಕ ಜಿ.ಸೋಮಶೇಖರ ರೆಡ್ಡಿ ಪ್ರತ್ಯೇಕ ಜಿಲ್ಲೆಯ ವಿರುದ್ಧ ಧ್ವನಿ ಎತ್ತಿದ್ದಾರೆ. ಆದರೆ ಅರಣ್ಯ ಸಚಿವ ಆನಂದ್ ಸಿಂಗ್ ಹೊಸ ಜಿಲ್ಲೆ ಘೋಷಣೆಯನ್ನು ಸ್ವಾಗತಿಸಿದ್ದಾರೆ. ಇನ್ನು ಬಳ್ಳಾರಿ ಜಿಲ್ಲೆ ವಿಭಜಿಸುವುದಕ್ಕೆ ಹಲವು ಬಿಜೆಪಿ ಮುಖಂಡರು, ರೈತಸಂಘಟನೆಗಳು ವಿರೋಧಿಸಿದರೆ, ಹೊಸಪೇಟೆ ವ್ಯಾಪ್ತಿಯ ನಾಯಕರು ಸರ್ಕಾರವನ್ನು ಅಭಿನಂದಿಸಿದ್ದಾರೆ. ಇಷ್ಟೇ ಇಲ್ಲದೆ ಹರಪನಹಳ್ಳಿಯಲ್ಲಿ ಹರಪನಹಳ್ಳಿ ಜಿಲ್ಲಾ ಹೋರಾಟ ಸಮಿತಿಯು ದಿಢೀರ್ ಪ್ರತಿಭಟನೆ ನಡೆಸಿತು. ಈ ನಡುವೆ ಹೊಸಪೇಟೆ ಕೇಂದ್ರವಾಗಿಸಿಕೊಂಡು ಜಿಲ್ಲೆ ರಚನೆ ಮಾಡುತ್ತಿರುವುದಕ್ಕೆ ಹೊಸಪೇಟೆ ಭಾಗದಲ್ಲಿ ಸಂತಸ ವ್ಯಕ್ತವಾಗಿದೆ.

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

22

ಇಲಾಖೆ / ವಿಷಯ : DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ     ದಿನಾಂಕ : DATE: 19/11/20

# ವಿಜಯನಗರ ಹೊಸ ಜಿಲ್ಲೆ: ಬಳ್ಳಾರಿ ಹೋಳು

## ಶೀಘ್ರ ರಾಜ್ಯದ 31ನೇ ಜಿಲ್ಲೆಯಾಗಿ ಘೋಷಣೆ
## ರಾಜ್ಯ ಸಚಿವ ಸಂಪುಟದಿಂದ ತಾತ್ವಿಕ ಸಮ್ಮತಿ
## ಸಚಿವ ಆನಂದ್ ಸಿಂಗ್ ಹೋರಾಟಕ್ಕೆ ಗೆಲುವು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಳ್ಳಾರಿ ಜಿಲ್ಲೆಯ ಪಶ್ಚಿಮ ಭಾಗದ ತಾಲೂಕುಗಳನ್ನು ಒಳಗೊಂಡ ಪ್ರತ್ಯೇಕ ವಿಜಯ ನಗರ ಜಿಲ್ಲೆ ರಚನೆಗೆ ಬುಧವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ತಾತ್ವಿಕ ಅನುಮೋದನೆ ದೊರೆತಿದ್ದು, ಸದ್ಯದಲ್ಲೇ ಅಧಿಕೃತ ಘೋಷಣೆ ಹೊರಬೀಳಲಿದೆ.

ಈ ಬಗ್ಗೆ ಸಚಿವ ಸಂಪುಟ ಸಭೆ ಬಳಿಕ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ, ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಅನೌಪಚಾರಿಕವಾಗಿ ಚರ್ಚಿಸಿ ವಿಯನಗರ ಜಿಲ್ಲೆಯನ್ನು ರಚಿಸುವ ಬಗ್ಗೆ ತಾತ್ವಿಕ ಅನುಮೋದನೆ ನೀಡಲಾಗಿದೆ. ಹೊಸ ಜಿಲ್ಲೆಯಲ್ಲಿ ಯಾವ್ಯಾವ ತಾಲೂಕುಗಳು ಇರುತ್ತವೆ ಎಂಬುದು ಸೇರಿದಂತೆ ಅಂತಿಮ ರೂಪ ರೇಷೆ ಸಿದ್ಧಪಡಿಸಿ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಅಧಿಕೃತವಾಗಿ ಘೋಷಿಸಲಾಗುವುದು ಎಂದು ಹೇಳಿದರು. ↘9

**ಹೊಸಪೇಟೆಯಲ್ಲಿ ಸಂಭ್ರಮ ಬಳ್ಳಾರಿಯಲ್ಲಿ ಆಕ್ರೋಶ** ↘9

### ಜಿಲ್ಲೆಗಾಗಿ ಸಚಿವ ಸ್ಥಾನ ಬಿಡಲೂ ಸಿದ್ಧ

ಜಿಲ್ಲೆಯಾಗೋದು ನನಗೆ ಮುಖ್ಯ. ವಿಜಯನಗರ ಜಿಲ್ಲೆಗಾಗಿ ಸಚಿವ ಸ್ಥಾನ ತ್ಯಾಗಕ್ಕೂ ಸಿದ್ಧ. ಸಂಪುಟದ ವಿಸ್ತರಣೆ ವೇಳೆ ಸಿಎಂಗೆ ತೊಂದರೆಯಾದರೆ, ಅವರು ಸಚಿವ ಸ್ಥಾನದ ರಾಜೀನಾಮೆ ಕೇಳುವುದು ಬೇಡ. ನಾನೇ ಅವರಿಗೆ ಗೊತ್ತಿಲ್ಲದಂತೆ ಆನಂದದಿಂದ ರಾಜೀನಾಮೆ ಸಲ್ಲಿಸುವೆ.

• **ಆನಂದ್ ಸಿಂಗ್** ಅರಣ್ಯ ಸಚಿವ

### ಜನ ಬಿಜೆಪಿಯನ್ನು ತಿರಸ್ಕರಿಸುತ್ತಾರೆ

ಬಳ್ಳಾರಿ ಜಿಲ್ಲೆ ವಿಭಜನೆ ಬೇಡವೆಂದು ಸಿಎಂ ಬಳಿ ಅನೇಕ ಬಾರಿ ಕೇಳಿದ್ದೆವು. ಆದರೂ ಅವರು ಬಳ್ಳಾರಿ ಇಬ್ಭಾಗ ಆಗಬೇಕು ಎಂದು ನಿರ್ಧರಿಸಿದಂತಿದೆ. ಇದರಿಂದ ಬಿಜೆಪಿಗೆ ನಷ್ಟವೇ ಆಗಲಿದೆ. ಅಖಂಡ ಜಿಲ್ಲೆಯನ್ನು ಇಬ್ಭಾಗ ಮಾಡಿದರೆ ಜಿಲ್ಲೆಯ ಜನರು ಬಿಜೆಪಿ ತಿರಸ್ಕರಿಸಲಿದ್ದಾರೆ.

• **ಸೋಮಶೇಖರ್ ರೆಡ್ಡಿ** ಬಳ್ಳಾರಿ ಶಾಸಕ